# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ವೈದ್ಯಾಧಿಕಾರಿ/ಸಿಬ್ಬಂದಿಯವರುಗಳ ಹುದ್ದೆಗಳ ಭರ್ತಿಯಾದ್ದರಿಂದ ವೇತನ/ಬಾಕಿ ವೇತನ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 5 ಶಾಖೆಯ ಇ-ಆಫೀಸ್ ಕಡತ ಸಂಖ್ಯೆ:ಆಇ 357 ವೆಚ್ಚ 5/2020

**ಪ್ರಸ್ತಾವನೆ:**

ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ವೈದ್ಯಾಧಿಕಾರಿ/ಸಿಬ್ಬಂದಿಯವರುಗಳ ಹುದ್ದೆಗಳು ಭರ್ತಿಯಾದ್ದರಿಂದ 2020-21ನೇ ಸಾಲಿನ ವೇತನ/ಬಾಕಿ ವೇತನ ವೆಚ್ಚಕ್ಕಾಗಿ ಅನುಕ್ರಮವಾಗಿ ರೂ.20.73ಲಕ್ಷ ಮತ್ತು ರೂ.8.35ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2210-00-106-0-48-005, 2210-00-102-0-31-005, 2210-00-101-0-35-005, 2210-00-101-0-29-005 ಮತ್ತು 2210-00-104-0-61-005ರಡಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.9.00ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300 ರಡಿ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.14.68ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 291 ವೆಚ್ಚ 6/2020(ಇ) ದಿನಾಂಕ: 27ನೇ ಆಗಸ್ಟ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5ರ ಲೆಕ್ಕ ಶೀರ್ಷಿಕೆಯಡಿ ಕಾಲಂ 6ರ ಒಟ್ಟು ರೂ29.08ಲಕ್ಷ (ರೂಪಾಯಿ ಇಪ್ಪತ್ತೊಂಬತ್ತು ಲಕ್ಷದ ಎಂಟು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

(ರೂ.ಲಕ್ಷಗಳಲ್ಲಿ)

| ಕ್ರಸಂ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|---|
| 1 | 2 | 3 | 4 | 5 | 6 |
| 1 | ಬಾಗಲಕೋಟೆ | 2210-00-106-0-48-005 | 8.39 | | 8.39 |
| 2 | ಧಾರವಾಡ | 2210-00-102-0-31-005<br>2210-00-101-0-35-005 | 10.14<br>2.06 | | 12.20 |
| 3 | ಹಾವೇರಿ | 2210-00-101-0-29-005 | 0.14 | | 0.14 |
| 4 | ಹೊಳೆನರಸೀಪುರ | 2210-00-104-0-61-005 | | 8.35 | 8.35 |
| | ಒಟ್ಟು | | **20.73** | **8.35** | **29.08** |

1414890557 28/8/2020

1414890564 28/8/2020

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ/ಧಾರವಾಡ/ಹಾವೇರಿ/ಹಾಸನ
4. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
5. ಜಿಲ್ಲಾ ಖಜಾನಾಧಿಕಾರಿಗಳು, ಬಾಗಲಕೋಟೆ/ಧಾರವಾಡ/ಹಾವೇರಿ
6. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಹೊಳೆನರಸೀಪುರ
7. ಉಪ ಖಜಾನಾಧಿಕಾರಿಗಳು, ಹೊಳೆನರಸೀಪುರ
8. ಆರ್ಥಿಕ ಇಲಾಖೆ ವೆಚ್ಚ 5 ಶಾಖೆ
9. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ